<u>ಅಸಲು ದಾವಾ ಸಂಖ್ಯೆ: **-151/2015**</u> ಪಿ.ಡಬ್ಲ್ಯೂ**:-2**

ದಿನಾಂಕಃ **04-12-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದ :-</u>

ವಾದಿ ಮತ್ತು ಪ್ರತಿವಾದಿಗಳು ಗೊತ್ತು. ವಾದಿ ಪ್ರತಿವಾದಿಯ ವಿರುದ್ಧ ಏನು ಪರಿಹಾರ ಕೋರಿ ದಾವೆಯನ್ನು ಸಲ್ಲಿಸಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ. ದಾವಾ ಆಸ್ತಿಯು ಸರ್ವೇ ನಂ.**35** ರಲ್ಲಿ ಬರುವ ಬಗ್ಗೆ ನನಗೆ ಗೊತ್ತಿಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳು ನನಗೆ ಗೊತ್ತಿಲ್ಲ. ವಾದಿಯು ಯಾವ ಆಸ್ತಿಗೆ ಸಂಬಂಧಿಸಿದಂತೆ ದಾವೆಯನ್ನು ಸಲ್ಲಿಸಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ. ಆದರೆ **22** ಇಂಟು **110** ಆಸ್ತಿಗೆ ಸಂಬಂಧಪಟ್ಟಂತೆ ದಾವೆಯನ್ನು ಸಲ್ಲಿಸಿದ್ದಾರೆ. ದಾವಾ ಆಸ್ತಿಯು ಆಸ್ತಿ ನಂ.**97** ರಲ್ಲಿ ಬರುವುದಿಲ್ಲ. ಸರ್ವೇ ನಂ.**35** ರಲ್ಲಿ ಬರುತ್ತದೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯು ಪ್ರತಿವಾದಿಯ ತಾಯಿಗೆ ವಿಭಾಗದ ಮೂಲಕ ಬಂದಿದ್ದು ತದನಂತರ ಪ್ರತಿವಾದಿಗಳ ಭಾಗಾಂಶಕ್ಕೆ ಬಂದಿದೆ ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿಯು ಮುಂದುವರೆದು ರತ್ನಮ್ಮರವರು ನರಸಿಂಹಪ್ಪರವರಿಂದ **22** ಇಂಟು **110** ಆಸ್ತಿಯನ್ನು ಖರೀದಿ ಮಾಡಿರುತ್ತಾರೆ ಎಂದು ನುಡಿಯುತ್ತಾರೆ. ರತ್ನಮ್ಮರವರು ನರಸಿಂಹಪ್ಪರವರಿಂದ ಯಾವುದೇ ಆಸ್ತಿಯನ್ನು ಖರೀದಿ ಮಾಡಿಲ್ಲ ಎಂದರೆ ಸರಿಯಲ್ಲ. **22** ಇಂಟು **110** ರ ಆಸ್ತಿಯ ಚಕ್ಕುಬಂಧಿ ಪೂರ್ವಕ್ಕೆ ಭರ್ಮಪ್ಪರವರ ಮನೆ, ಪಶ್ಚಿಮಕ್ಕೆ ದೇವರ ಜಮೀನು, ಉತ್ತರಕ್ಕೆ ರಾಂಪುರ ರಸ್ತೆ, ದಕ್ಷಿಣಕ್ಕೆ ಉಂಬಳಿ ಜಮೀನು. ದಾವಾ ಆಸ್ತಿಗೆ ಯಾವುದೇ ಕಾನೆಶ್ಮಾರಿ ನಂಬರ್ ಇರುವುದಿಲ್ಲ ಸರ್ವೇ ನಂ.**35** ರಲ್ಲಿ ಇದ್ದರೂ ಸಹ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯ ಸ್ವಾಧೀನಾನುಭವದಲ್ಲಿರುವ ದಾವಾ ಆಸ್ತಿಯಲ್ಲಿ ವಾದಿಗೆ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ಸಂಬಂಧಪಟ್ಟ ಆಸ್ತಿಯ ಬಗ್ಗೆ ನಾನು ಯಾವುದೇ ದಾಖಲಾತಿಗಳನ್ನು

ನೋಡಿರುವುದಿಲ್ಲ. ವಾದಿಯ ಆಸ್ತಿಗೆ ಸಂಬಂಧಪಟ್ಟಂತೆ ನಾನು ಯಾವುದೇ ದಾಖಲಾತಿಗಳ್ನು ನೋಡಿರುವುದಿಲ್ಲ. ರತ್ನಮ್ಮರವರು ನರಸಿಂಹಪ್ಪರವರಿಂದ **2002** ನೇ ಸಾಲಿನಲ್ಲಿ ಖರೀದಿ ಮಾಡಿರುತ್ತಾರೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳನ್ನು ಯಾರು ಹೇಳಿ ಬರೆಸಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ. ವಾದಿಯು ಸಹಿ ಮಾಡು ಎಂದು ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ. ವಾದಿಗೆ ಈ ದಾವೆಯನ್ನು ಸಲ್ಲಿಸಲು ಯಾವುದೇ ವ್ಯಾಜ್ಯಾ ಕಾರಣವು ಉದ್ಭವಿಸಿಲ್ಲ ಎಂದರೆ ಸರಿಯಲ್ಲ. ವಾದಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಈ ಮೊದಲು ಪ್ರತಿವಾದಿಗಳ ತಾಯಿ ಸ್ವಾಧೀನಾನುಭವದಲ್ಲಿದ್ದರು ಈಗ ಪ್ರತಿವಾದಿಗಳು ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ಸರಿಯಲ್ಲ. ವಾದಿಯ ಜೊತೆ ನಾನು ಅನ್ಯೋನ್ಯವಾಗಿದ್ದೇನೆ. ನಾನು ವಾದಿಯ ಜೊತೆ ಅನ್ಯೋನ್ಯವಾಗಿದ್ದರಿಂದ ವಾದಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.